# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **308**
ಸದಸ್ಯರ ಹೆಸರು : ಶ್ರೀ ಟಿ.ಎ.ಶರವಣ
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : **15.02.2023.**
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಪರಿವರ್ತನೆ ಮಾಡುವಾಗ ಸಲ್ಲಿಸುವ ಅರ್ಜಿ ಶುಲ್ಕವನ್ನು ಎಷ್ಟು ಹೆಚ್ಚಳ ಮಾಡಲಾಗಿದೆ; | ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95(2) ರಡಿ ಕಲ್ಪಿಸಲಾದ ಅವಕಾಶದಂತೆ ಅರ್ಜಿದಾರರು ಭೂ ಪರಿವರ್ತನೆಗೆ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಪರಿವರ್ತನೆಗೆ ಸಂಬಂಧಿಸಿದಂತೆ ಅರ್ಜಿದಾರರು ಭೂ ಪರಿವರ್ತನೆಗೆ ಅರ್ಜಿಯನ್ನು http:/ landrecords.karnataka.gov.in/citizen portal ನಲ್ಲಿ ಲಾಗಿನ್ ಆಗುವ ಮೂಲಕ Affidavit Based Conversion module ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಯಾವುದೇ ಅರ್ಜಿ ಶುಲ್ಕವಿರುವುದಿಲ್ಲ<br><br>ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಪರಿವರ್ತನೆಗೆ ಸಂಬಂಧಿಸಿದಂತೆ ಕರ್ನಾಟಕ ಭೂ ಕಂದಾಯ ನಿಯಮಗಳು, 1966 ಕಲಂ 107, 107ಎ ಮತ್ತು 107ಎಎ ರಂತೆ ಶುಲ್ಕ ವಿಧಿಸಲಾಗುತ್ತಿದೆ.<br><br>ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 96ರಲ್ಲಿ ಬೇಸಾಯದ ಭೂಮಿಯನ್ನು ಅನುಮತಿ ಇಲ್ಲದೇ ಇತರೆ ಉದ್ದೇಶಕ್ಕಾಗಿ ಉಪಯೋಗಿಸುವುದಕ್ಕೆ ವಿಧಿಸುತ್ತಿದ್ದ ದಂಡದ ಮೊತ್ತವು ಸುಮಾರು ವರ್ಷಗಳಿಂದ ಪರಿಷ್ಕರಿಸದ ಹಿನ್ನೆಲೆಯಲ್ಲಿ ಶುಲ್ಕವನ್ನು ಪರಿಷ್ಕರಿಸಲಾಗಿದೆ. |
| ಆ) | ಸರ್ಕಾರವು ಭಾರಿ ಪ್ರಮಾಣದಲ್ಲಿ ಶುಲ್ಕ ಹೆಚ್ಚಳ ಮಾಡಿರುವುದಕ್ಕೆ ಕಾರಣಗಳೇನು; | |
| ಇ) | ಇದರಿಂದ ಸಣ್ಣ ಮತ್ತು ಅತಿ ಸಣ್ಣ ಹಿಡುವಳಿದಾರರ ಮೇಲೆ ದುಷ್ಪರಿಣಾಮ ಬೀರುವುದಿಲ್ಲವೆ; ಈ ಪ್ರಮಾಣದ ಶುಲ್ಕ ಹೆಚ್ಚಳದಿಂದ ಸರ್ಕಾರವೇ ಅನಧಿಕೃತ ಬಡಾವಣೆಗಳ ನಿರ್ಮಾಣಕ್ಕೆ ಪ್ರೋತ್ಸಾಹಿಸಿದಂತಾಗುವುದಿಲ್ಲವೇ? | |

ಸಂಖ್ಯೆ: ಆರ್‌ಡಿ 23 ಎಲ್‌ಜಿಕ್ಯೂ 2023

(ಆರ್.ಅಶೋಕ)
ಕಂದಾಯ ಸಚಿವರು